3 56

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಕೃಷಿಯಲ್ಲಿ ಡಿಪ್ಲೊಮಾ ಬಿ.ಎಸ್ಸಿ (ಕೃಷಿ) ಹಾಗೂ ತತ್ಸಮಾನ ಪದವಿಗಳಲ್ಲಿನ ಪ್ರವೇಶದಲ್ಲಿನ ರೈತರ ಹಾಗೂ ಕೃಷಿ ಕಾರ್ಮಿಕರ ಮಕ್ಕಳಿಗೆ ಶೇ. 40 ರಷ್ಟು ಮೀಸಲಿಡುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ: ಎಹೆಚ್‌ಡಿ 63 ಎಯುಎಂ 2003, ದಿನಾಂಕ: 10-07-2003.
2) ಕುಲಸಚಿವರು ಕೃಷಿ ವಿಶ್ವವಿದ್ಯಾಲಯ ಬೆಂಗಳೂರು ರವರ ಪತ್ರ ದಿನಾಂಕ: 01-02-2014, ಸಂಖ್ಯೆ: ಕು.ಸ/ಅ-1/ಡಿಪ್ಲೊಮಾ(ಕೃಷಿ)/2013-14.

*** **** ***

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂ. (1)ರ ದಿನಾಂಕ: 10-07-2003ರ ಆದೇಶದಲ್ಲಿ ಕೃಷಿ ವಿಶ್ವವಿದ್ಯಾಲಯಗಳ ಅಧಿನಿಯಮ, 2009ರ ಪ್ರಕರಣ (ಕಲಂ)-6(2)(1) ರನ್ವಯ ಸರ್ಕಾರವು ವಿಶ್ವವಿದ್ಯಾಲಯಗಳ ಪ್ರವೇಶಗಳಲ್ಲಿ ಮೀಸಲಾತಿಯನ್ನು ನಿಗದಿಪಡಿಸಲು ಅಧಿಕಾರವಿದ್ದು ಈ ಅಧಿಕಾರದನ್ವಯ ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಬಿ.ಎಸ್ಸಿ (ಕೃಷಿ) ಹಾಗೂ ತತ್ಸಮಾನ ಪದವಿಗಳಲ್ಲಿ ಕೃಷಿಕರ ಅಥವಾ ಅವರ ಮಕ್ಕಳಿಗಾಗಿ ಶೇ. 23.8 ರಷ್ಟು ಪ್ರವೇಶದಲ್ಲಿ ಮೀಸಲಾತಿಯನ್ನು ನಿಗದಿಪಡಿಸಲಾಗಿದೆ.

ಮಾನ್ಯ ಮುಖ್ಯ ಮಂತ್ರಿಯವರು ದಿನಾಂಕ: 14-02- -2014ರಂದು ವಿಧಾನ ಮಂಡಲದಲ್ಲಿ ಮಂಡಿಸಿದ ಆಯವ್ಯಯದಲ್ಲಿ (ಕಂಡಿಕೆ-34) ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಡಿಪ್ಲೊಮಾ ಬಿ.ಎಸ್ಸಿ (ಕೃಷಿ) ಹಾಗೂ ತತ್ಸಮಾನ ಪದವಿಗಳಲ್ಲಿ ರೈತರ ಹಾಗೂ ಕೃಷಿ ಕಾರ್ಮಿಕರ ಮಕ್ಕಳ ಪ್ರವೇಶಕ್ಕೆ ಈಗಿರುವ ಮೀಸಲಾತಿ ಪ್ರಮಾಣವನ್ನು ಶೇ. 40ಕ್ಕೆ ಹೆಚ್ಚಿಸಲಾಗುವುದು ಎಂಬುದಾಗಿ ಘೋಷಿಸಿರುತ್ತಾರೆ.

ಮೇಲ್ಕಂಡ ಹಿನ್ನೆಲೆಯಲ್ಲಿ ಕುಲಸಚಿವರು, ಕೃಷಿ ವಿಶ್ವವಿದ್ಯಾಯಲ ಬೆಂಗಳೂರು ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಪತ್ರದಲ್ಲಿ ಕೃಷಿ ಪದವಿ ಮತ್ತು ಡಿಪ್ಲೊಮಾ ಕೋರ್ಸುಗಳಿಗೆ ಕೃಷಿ ಕುಟುಂಬದ ಹಿನ್ನೆಲೆಯಿಂದ ಬರುವ ವಿದ್ಯಾರ್ಥಿಗಳಿಗೆ ಹೆಚ್ಚಿನ ಅದ್ಯತೆ ನೀಡುವುದರಿಂದ, ರಾಜ್ಯದ ಕೃಷಿಕರಿಗೆ ಅನುಕೂಲಗಾಗುತ್ತದೆ ಎಂಬ ದೃಷಿಯಿಂದ, ಕೃಷಿಕರ ಮಕ್ಕಳಿಗೆ ಮತ್ತು ಕೃಷಿ ಹಿನ್ನೆಲೆಯಿಂದ ಬರುವ ವಿದ್ಯಾರ್ಥಿಗಳಿಗೆ ಹೆಚ್ಚಿನ ಪ್ರಮಾಣದ ಸೀಟುಗಳನ್ನು ಮೀಸಲಿರಿಸಿದಲ್ಲಿ, ಅಂತಹ ವಿದ್ಯಾರ್ಥಿಗಳು ಕೃಷಿಗೆ ಸಂಬಂಧಪಟ್ಟ ಪದವಿ ಮತ್ತು ಡಿಪ್ಲೊಮಾ ಕೋರ್ಸುಗಳಲ್ಲಿ ಅಭ್ಯಾಸಮಾಡಿ ಹೆಚ್ಚಿನ ಜ್ಞಾನವನ್ನು ಸಂಪಾದಿಸಿ ಅದನ್ನು ಕೃಷಿ ಚಟುವಟಿಕೆಗಳಿಗೆ ತೊಡಗಿದ್ದಾರೆ ಎನ್ನುವ ದೃಷ್ಟಿಯಿಂದ ಈ ಮೀಸಲಾತಿಯನ್ನು ಶೇ. 23.8 ರಿಂದ ಹೆಚ್ಚಿಸಿ ಕೃಷಿ ಡಿಪ್ಲೊಮಾ ಕೋರ್ಸುಗಳಿಗೆ ವಿಸ್ತರಿಸುವಂತೆ ಸರ್ಕಾರವನ್ನು ಕೋರಿರುತ್ತರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 22 ಕೃವಿವಿ 2014 ಬೆಂಗಳೂರು,ದಿನಾಂಕ : 05-07-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಎಹೆಚ್‌ಡಿ 63 ಎಯುಎಂ 2003, ದಿನಾಂಕ: 10-07-2003ರನ್ವಯ ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಬಿ.ಎಸ್ಸಿ (ಕೃಷಿ) ಹಾಗೂ ತತ್ಸಮಾನ ಪದವಿಗಳಲ್ಲಿ ರೈತರ ಹಾಗೂ ಕೃಷಿ ಕಾರ್ಮಿಕರ ಮಕ್ಕಳಿಗಾಗಿ ಪ್ರವೇಶದಲ್ಲಿ ಶೇ.23.8 ರಷ್ಟು ನಿಗದಿಪಡಿಸಿರುವ ಮೀಸಲಾ

ಯನ್ನು ಶೇ. 40ಕ್ಕೆ ಹೆಚ್ಚಿಸಿದೆ ಹಾಗೂ ಈ ಹೆಚ್ಚಳದ ಮೀಸಲಾತಿಯನ್ನು 2 ವರ್ಷದ ಡಿಪ್ಲೊಮಾ (ಕೃಷಿ) ಕಾರ್ಯಕ್ರಮಗಳಿಗೂ ವಿಸ್ತರಿಸಲು ಅನುಮೋದನೆ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 239 ವೆಚ್ಚ-4/2014, ದಿನಾಂಕ: 06-06-2014ರಲ್ಲಿ ನೀಡಿದ ಅಭಿಪ್ರಾಯ ಹಾಗೂ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

---

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು)
ಕೃಷಿ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು-ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಿ 25 ಪ್ರತಿಗಳನ್ನು ಕೃಷಿ 'ಬಿ' ಶಾಖೆಗೆ ಒದಗಿಸಲು ಕೋರಿದೆ.

ಪ್ರತಿಗಳು:

1. ಮಹಾಲೇಖಪಾಲರು, ಕರ್ನಾಟಕ, (ಲೆಕ್ಕಪತ್ರ/ತನಿಕೆ)ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಯ, ಜಿ.ಕೆ.ವಿ.ಕೆ., ಬೆಂಗಳೂರು/ಧಾರವಾಡ/ರಾಯಚೂರು.
3. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ನವಿಲೆ, ಶಿವಮೊಗ್ಗ.
4. ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
5. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು
6. ಸಚಿವ ಸಂಪುಟ ಶಾಖೆ ( ವಿಷಯ ಸಂಖ್ಯೆ: ಸಿ 318/2014)
7. ಸರ್ಕಾರದ ಪ್ರಧಾನ ಕಾರ್ಯದರ್ಶಿ ಕೃಷಿ ಇಲಾಖೆ ರವರ ಆಪ್ತಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-4-5), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ, ವಿಧಾನಸೌಧ, ಬೆಂಗಳೂರು
10. ಸರ್ಕಾರದ ಉಪಕಾರ್ಯದರ್ಶಿ 1&2, ಕೃಷಿ ಇಲಾಖೆಯವರ ಆಪ್ತ ಸಹಾಯಕರು.
11. ಶಾಖಾ ರಕ್ಷಾಕಡತ/ ಹೆಚ್ಚುವರಿ ಪ್ರತಿಗಳು.